KA / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ

| ಭಾಗ – IV-A | ಬೆಂಗಳೂರು, ಶನಿವಾರ, ಏಪ್ರಿಲ್ ೩, ೨೦೧೦ (ಚೈತ್ರ ೧೩, ಶಕ ವರ್ಷ ೧೯೩೨) | ನಂ. ೩೩೯ |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 45 ಶಾಸನ 2009, ಬೆಂಗಳೂರು, ದಿನಾಂಕ: 3ನೇ ಏಪ್ರಿಲ್, 2010**

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2010ಕ್ಕೆ 2010ರ ಏಪ್ರಿಲ್ ತಿಂಗಳ ಒಂದನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2010ರ ಕರ್ನಾಟಕ ಅಧಿನಿಯಮ ಸಂಖ್ಯೆ:12 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2010ರ ಕರ್ನಾಟಕ ಅಧಿನಿಯಮ ಸಂಖ್ಯೆ: 12**

(2010ರ ಏಪ್ರಿಲ್ ಮೂರನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟವಾಗಿದೆ)

**ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2010**

(2010ರ ಏಪ್ರಿಲ್ ಒಂದನೇ ದಿನಾಂಕದಂದು ರಾಜ್ಯ ಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕದ ಗಡಿ ಪ್ರದೇಶದ ಅಭಿವೃದ್ಧಿಗಾಗಿ **ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವೊಂದರ** ಸ್ಥಾಪನೆಗೆ ಮತ್ತು ಕರ್ನಾಟಕ ಗಡಿ ಅಭಿವೃದ್ಧಿಗೆ ಸಂಬಂಧಪಟ್ಟ ಯೋಜನೆಗಳು ಮತ್ತು ಕಾರ್ಯಕ್ರಮಗಳ ಅನುಷ್ಠಾನ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸುವುದಕ್ಕಾಗಿ ಒಂದು ಅಧಿನಿಯಮ.

ಕರ್ನಾಟಕದ ಗಡಿ ಪ್ರದೇಶದ ಅಭಿವೃದ್ಧಿಗಾಗಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವೊಂದರ ಸ್ಥಾಪನೆಗೆ ಮತ್ತು ಕರ್ನಾಟಕದ ಗಡಿ ಪ್ರದೇಶದ ಅಭಿವೃದ್ಧಿಗೆ ಸಂಬಂಧಪಟ್ಟ ಯೋಜನೆಗಳು ಮತ್ತು ಕಾರ್ಯಕ್ರಮಗಳ ಅನುಷ್ಠಾನ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನಕ್ಕೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ,

ಭಾರತ ಗಣರಾಜ್ಯದ ಅರವತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು.

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು **ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2010** ಎಂದು ಕರೆಯತಕ್ಕದ್ದು.

(2) ಇದು ರಾಜ್ಯ ಸರ್ಕಾರವು ಅಧಿಸೂಚನೆ ಮೂಲಕ ಗೊತ್ತುಪಡಿಸಬಹುದಾದಂಥ ದಿನಾಂಕದಂದು ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.**- ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಪ್ರಾಧಿಕಾರ" ಎಂದರೆ, 3 ನೇ ಪ್ರಕರಣದ ಮೇರೆಗೆ ರಚಿಸಲಾದ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ;

(ಬಿ) "ಗಡಿ ಪ್ರದೇಶ" ಎಂದರೆ ಅನುಸೂಚಿಯಲ್ಲಿ ನಮೂದಿಸಲಾಗಿರುವ ಕರ್ನಾಟಕ ರಾಜ್ಯದ ಗಡಿ ಭಾಗದಲ್ಲಿರುವ ತಾಲ್ಲೂಕುಗಳು ಹಾಗೂ ಇತರ ಪ್ರದೇಶಗಳು;

(ಸಿ) "ಅಧ್ಯಕ್ಷ" ಎಂದರೆ ಪ್ರಾಧಿಕಾರದ ಅಧ್ಯಕ್ಷ;

(ಡಿ) "ಇಲಾಖೆ" ಎಂದರೆ ಯಾವುದೇ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ರಾಜ್ಯ ಸರ್ಕಾರದಿಂದ ಸ್ಥಾಪಿತವಾದ ಯಾವುದೇ ನಿಕಾಯ ಅಥವಾ ನಿಗಮ ಅಥವಾ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವು ಪಡೆಯುತ್ತಿರುವ ಯಾವುದೇ ಸಂಸ್ಥೆ ಅಥವಾ ನಿಕಾಯವೂ ಸೇರಿದಂತೆ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು:

(ಇ) "ಸದಸ್ಯ " ಎಂದರೆ ಪ್ರಾಧಿಕಾರದ ಸದಸ್ಯ ;

(ಎಫ್) "ಯೋಜನೆಗಳು ಮತ್ತು ಕಾರ್ಯಕ್ರಮಗಳು" ಎಂದರೆ, ವಿವಿಧ ಇಲಾಖೆಗಳಲ್ಲಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿಗಾಗಿ ಪ್ರಾಧಿಕಾರದಿಂದ ಸಿದ್ಧಪಡಿಸಿದ ವಾರ್ಷಿಕ ಯೋಜನೆಗಳು ಮತ್ತು ಕಾರ್ಯಕ್ರಮಗಳು;

(ಜಿ) "ಕಾರ್ಯದರ್ಶಿ" ಎಂದರೆ ಪ್ರಾಧಿಕಾರದ ಕಾರ್ಯದರ್ಶಿ;

(ಹೆಚ್) "ವಿನಿಯಮಗಳು" ಎಂದರೆ, ಈ ಅಧಿನಿಯಮದ ಮೇರೆಗೆ ರಚಿಸಲಾದ ವಿನಿಯಮಗಳು;

## ಅಧ್ಯಾಯ - II

**3. ಪ್ರಾಧಿಕಾರದ ರಚನೆ** :- (1) ಈ ಅಧಿನಿಯಮವು ಪ್ರಾರಂಭವಾದ ತರುವಾಯ ಸಾಧ್ಯವಾದಷ್ಟು ಬೇಗನೆ, ಈ ಅಧಿನಿಯಮದ ಉದ್ದೇಶಗಳಿಗಾಗಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಪ್ರಾಧಿಕಾರವನ್ನು ರಚಿಸತಕ್ಕದ್ದು ಮತ್ತು ಅದರ ಕೇಂದ್ರ ಸ್ಥಳವು ಬೆಂಗಳೂರಿನಲ್ಲಿ ಇರತಕ್ಕದ್ದು.

(2) ಪ್ರಾಧಿಕಾರವು ಕರಾರು ಮಾಡಿಕೊಳ್ಳಲು ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿ ಇರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೊಳಗಾಗತಕ್ಕದ್ದು.

(3) ಪ್ರಾಧಿಕಾರವು ಈ ಮುಂದಿನ ಸದಸ್ಯರುಗಳನ್ನು ಹೊಂದಿರತಕ್ಕದ್ದು:-

(ಎ) ಗಡಿ ಪ್ರದೇಶ ಅಭಿವೃದ್ಧಿಗಾಗಿ ಕೆಲಸ ಮಾಡಿರುವಂಥ ಸರ್ಕಾರದಿಂದ ನಾಮ ನಿರ್ದೇಶಿತನಾದ ಒಬ್ಬ ವ್ಯಕ್ತಿಯು ಪ್ರಾಧಿಕಾರದ ಅಧ್ಯಕ್ಷರಾಗಿರತಕ್ಕದ್ದು.

(ಬಿ) ಗಡಿ ಪ್ರದೇಶಗಳ ಸಮಸ್ಯೆಗಳ ಅರಿವಿರುವ ಹಾಗೂ ಸಾಹಿತ್ಯ, ಆಡಳಿತ, ಶಿಕ್ಷಣ ಅಥವಾ ಕಾನೂನು ಕ್ಷೇತ್ರಗಳಲ್ಲಿ ವಿಶೇಷ ಜ್ಞಾನ ಅಥವಾ ಪ್ರಾಯೋಗಿಕ ಅನುಭವ ಹೊಂದಿರುವ ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿತರಾದ ಏಳು ಜನ .... ಸದಸ್ಯರು

(ಸಿ) ಸರ್ಕಾರದ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ .... ಪದನಿಮಿತ್ತ ಸದಸ್ಯರು

(ಡಿ) ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ .... ಪದನಿಮಿತ್ತ ಸದಸ್ಯರು

(ಇ) ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ .... ಪದನಿಮಿತ್ತ ಸದಸ್ಯರು

(ಎಫ್) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ .... ಪದನಿಮಿತ್ತ ಸದಸ್ಯರು

(ಜಿ) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ .... ಪದನಿಮಿತ್ತ ಸದಸ್ಯರು

(ಹೆಚ್) ಅಧ್ಯಕ್ಷರು, ಕನ್ನಡ ಸಾಹಿತ್ಯ ಪರಿಷತ್ತು .... ಪದನಿಮಿತ್ತ ಸದಸ್ಯ

(ಐ) ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ .... ಪದನಿಮಿತ್ತ ಸದಸ್ಯ

(ಜೆ) ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ .... ಪದನಿಮಿತ್ತ ಸದಸ್ಯ

(ಕೆ) ಪ್ರಾಧಿಕಾರದ ಕಾರ್ಯದರ್ಶಿ .... ಸದಸ್ಯ – ಕಾರ್ಯದರ್ಶಿ

**4. ಪದಾವಧಿ ಮತ್ತು ಸೇವಾ ಷರತ್ತುಗಳು.–** (1) ರಾಜ್ಯ ಸರ್ಕಾರದ ಇಚ್ಛೆಗೆ ಒಳಪಟ್ಟು ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ ಅಧ್ಯಕ್ಷ ಮತ್ತು ಇತರೆ ಅಧಿಕಾರೇತರ ಸದಸ್ಯರುಗಳು ಮೂರು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು. ಸರ್ಕಾರದ ಅಧಿಕಾರಿ ಸದಸ್ಯರಿಗೆ ಸಂಬಂಧಿಸಿದಂತೆ ಇದು ಅನ್ವಯವಾಗತಕ್ಕದಲ್ಲ.

(2) ಅಧ್ಯಕ್ಷರು ಅಥವಾ ಪದನಿಮಿತ್ತ ಸದಸ್ಯರ ಹೊರತಾಗಿ ಯಾವೊಬ್ಬ ಸದಸ್ಯರೂ ಅದಕ್ಕೆ ತಮ್ಮ ಸಹಿ ಹಾಕಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ತಮ್ಮ ಸದಸ್ಯತ್ವಕ್ಕೆ ರಾಜೀನಾಮೆ ನೀಡಬಹುದು. ಆದರೆ ಅವರ ರಾಜೀನಾಮೆಯು ಅಂಗೀಕಾರವಾಗುವವರೆಗೆ ಹುದ್ದೆಯಲ್ಲಿ ಮುಂದುವರೆಯತಕ್ಕದ್ದು

(3) ಅಧ್ಯಕ್ಷರ ಅಥವಾ ಯಾವೊಬ್ಬ ಸದಸ್ಯರ ಹುದ್ದೆಗಳಲ್ಲಿ ಉಂಟಾಗುವ ಆಕಸ್ಮಿಕ ಖಾಲಿ ಸ್ಥಾನಕ್ಕೆ ರಾಜ್ಯ ಸರ್ಕಾರವು ಒಬ್ಬ ವ್ಯಕ್ತಿಯನ್ನು ಸಂದರ್ಭಾನುಸಾರ ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ನಾಮ ನಿರ್ದೇಶನ ಮಾಡುವ ಮೂಲಕ ಭರ್ತಿ ಮಾಡತಕ್ಕದ್ದು ಮತ್ತು ಹಾಗೆ ನಾಮನಿರ್ದೇಶಿತರಾದ ಅಧ್ಯಕ್ಷ ಅಥವಾ ಸದಸ್ಯರು ತನಗಿಂತ ಮೊದಲಿದ್ದ ವ್ಯಕ್ತಿಯ ಪದಾವಧಿಯಲ್ಲಿ ಪೂರ್ಣವಾಗದೆ ಉಳಿದ ಭಾಗದವರೆಗೆ ಅಧಿಕಾರವನ್ನು ಹೊಂದಿರತಕ್ಕದ್ದು.

(4) ಅಧ್ಯಕ್ಷರು ಮತ್ತು ಇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯೆಗಳನ್ನು ಪಡೆಯತಕ್ಕದ್ದು.

(5) ಅಧ್ಯಕ್ಷರು ಮತ್ತು ಇತರ ಸದಸ್ಯರುಗಳಿಗೆ ಸಂದಾಯ ಮಾಡಬೇಕಾದ ಭತ್ಯೆಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

(6) ಪ್ರಾಧಿಕಾರದ ಯಾವುದೇ ಕ್ರಮ ಅಥವಾ ವ್ಯವಹರಣೆಯು ಪ್ರಾಧಿಕಾರದಲ್ಲಿ ಯಾವುದೇ ಖಾಲಿಸ್ಥಾನವಿರುವುದರಿಂದ ಅಥವಾ ಪ್ರಾಧಿಕಾರದ ರಚನೆಯಲ್ಲಿ ದೋಷವಿದೆ ಎಂಬ ಕಾರಣ ಮಾತ್ರದಿಂದಲೇ ಅಮಾನ್ಯವಾಗತಕ್ಕದ್ದಲ್ಲ.

5. **ಹುದ್ದೆಯ ಸದಸ್ಯತ್ವಕ್ಕೆ ಅನರ್ಹತೆ.**– (1) ಒಬ್ಬ ವ್ಯಕ್ತಿಯು, ಅವನು, –

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧ:ಪತನವನ್ನೊಳಗೊಳ್ಳುವ ಒಂದು ಅಪರಾಧಕ್ಕಾಗಿ ಅಪರಾಧ ನಿರ್ಣಿತನಾಗಿದ್ದು ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ, ಅಥವಾ

(ಬಿ) ಅಸ್ವಸ್ಥಚಿತ್ತದವನಾಗಿದ್ದು, ಹಾಗೆಂದು ಒಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ : ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ : ಅಥವಾ

(ಡಿ) ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನ ಅಥವಾ ನಿಯಂತ್ರಣದಲ್ಲಿರುವ ಒಂದು ನಿಕಾಯ ಅಥವಾ ನಿಗಮದ ಸೇವೆಯಿಂದ ತೆಗೆದುಹಾಕಲಾದವನಾಗಿದ್ದರೆ ಅಥವಾ ವಜಾ ಆದವನಾಗಿದ್ದರೆ : ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾರ್ಯದಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಮೇರೆಗೆ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವತ: ಅವನು ಅಥವಾ ಅವನ ಪಾಲುದಾರನು ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ:

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ,

– ಸದಸ್ಯನಾಗಿ ನೇಮಿತನಾಗುವುದಕ್ಕೆ ಮತ್ತು ಸದಸ್ಯನಾಗುವುದಕ್ಕೆ ಅನರ್ಹನಾಗಿರತಕ್ಕದ್ದು.

(2) ಯಾವೊಬ್ಬ ವ್ಯಕ್ತಿಯನ್ನು, ಆತನು ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟ ಯಾವುದೇ ಜಾಹೀರಾತನ್ನು ಪ್ರಕಟಿಸಲಾಗಿರುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆ ಎಂಬ ಕಾರಣ ಮಾತ್ರದಿಂದಲೇ ಉಪಪ್ರಕರಣ (1)ರ (ಇ) ಖಂಡದ ಅಡಿಯಲ್ಲಿ ಅನರ್ಹಗೊಳಿಸತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಷೇರು ಅಥವಾ ಹಿತಾಸಕ್ತಿ ಹೊಂದಿರುವನೆಂದು ಭಾವಿಸತಕ್ಕದ್ದಲ್ಲ.

6. **ಸದಸ್ಯನನ್ನು ತೆಗೆದುಹಾಕುವುದು.**– (1) ರಾಜ್ಯ ಸರ್ಕಾರವು ಅಧ್ಯಕ್ಷ ಅಥವಾ ಇತರ ಸದಸ್ಯನನ್ನು ಅವನು,–

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಯಾವುದೇ ಅನರ್ಹತೆಗಳಿಗೆ ಒಳಪಟ್ಟರೆ:

ಪರಂತು, ಅಧ್ಯಕ್ಷ ಅಥವಾ ಸದಸ್ಯನನ್ನು ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವನಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ಅವನು ಸದರಿ ಪ್ರಕರಣದ (1)ನೇ ಉಪ-ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾನೆಂಬ ಕಾರಣದ ಮೇಲೆ ತೆಗೆದುಹಾಕತಕ್ಕದ್ದಲ್ಲ ; ಅಥವಾ

(ಬಿ) ಅವನು ಕಾರ್ಯವನ್ನು ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥನಾದರೆ ; ಅಥವಾ

(ಸಿ) ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ : ಅಥವಾ

(ಡಿ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ತನ್ನ ಸ್ಥಾನವನ್ನು ಅವನು ದುರುಪಯೋಗ ಪಡಿಸಿಕೊಂಡಿದ್ದು, ಅವನನ್ನು ಆ ಪದದಲ್ಲಿ ಮುಂದುವರಿಸಿದರೆ ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವುದೆಂದು ಕಂಡುಬಂದರೆ,

– ಸದಸ್ಯತ್ವದಿಂದ ಅವನನ್ನು ತೆಗೆದು ಹಾಕತಕ್ಕದ್ದು:

ಪರಂತು ಯಾವೊಬ್ಬ ಸದಸ್ಯರನ್ನು ಅವರಿಗೆ ಅಂಥ ಪ್ರಸ್ತಾವದ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಒಂದು ಅವಕಾಶವನ್ನು ಕೊಟ್ಟ ಹೊರತು, ಈ ಖಂಡದ ಮೇರೆಗೆ ತೆಗೆದುಹಾಕತಕ್ಕದ್ದಲ್ಲ.

**7. ಕಾರ್ಯದರ್ಶಿ.–** (1) ರಾಜ್ಯ ಸರ್ಕಾರವು, ಗ್ರೂಪ್ – ಎ ದರ್ಜೆಗೆ ಕಡಿಮೆಯಿಲ್ಲದ ಒಬ್ಬ ಅಧಿಕಾರಿಯನ್ನು ಪ್ರಾಧಿಕಾರದ ಕಾರ್ಯದರ್ಶಿಯಾಗಿ ನೇಮಕ ಮಾಡತಕ್ಕದ್ದು. ಕಾರ್ಯದರ್ಶಿಯು ರಾಜ್ಯ ಸರ್ಕಾರವು ಆಗಿಂದಾಗ್ಗೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(2) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ಕಾರ್ಯದರ್ಶಿಯವರಿಗೆ ರಜೆಗಳನ್ನು ಮಂಜೂರು ಮಾಡಬಹುದು.

(3) ಕಾರ್ಯದರ್ಶಿಯು ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕರಾಗಿರತಕ್ಕದ್ದು;

(ಎ) ಪ್ರಾಧಿಕಾರದಿಂದ ಅನುಮೋದಿತವಾದ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಕಾರ್ಯಗತಗೊಳಿಸಲು ಜವಾಬ್ದಾರನಾಗಿರತಕ್ಕದ್ದು;

(ಬಿ) ಪ್ರಾಧಿಕಾರದ ನಿಧಿಯನ್ನು ನಿರ್ವಹಿಸತಕ್ಕದ್ದು;

(ಸಿ) ಪ್ರಾಧಿಕಾರದ ಲೆಕ್ಕಪತ್ರಗಳನ್ನು ಇಟ್ಟುಕೊಂಡು ಬರುವಂತೆ ಮಾಡತಕ್ಕದ್ದು ;

(ಡಿ) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರ ಮೇರೆಗೆ ಅವನಿಗೆ ಪ್ರದಾನ ಮಾಡಲಾಗಿರುವಂಥ ಇತರ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು ; ಮತ್ತು

(ಇ) ಅಧ್ಯಕ್ಷರು ತಪಾಸಣೆ ಮಾಡುವ ಸಮಯದಲ್ಲಿ, ಕಚೇರಿಯ ದಾಖಲೆಗಳನ್ನು ಹಾಜರುಪಡಿಸಲು ಜವಾಬ್ದಾರನಾಗಿರತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಿಗಳು ಮತ್ತು ಅವರ ಸೇವಾ ಷರತ್ತುಗಳು.–** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು ರಾಜ್ಯ ಸರ್ಕಾರವು ಅಥವಾ ರಾಜ್ಯ ಸರ್ಕಾರವು ಪ್ರಾಧಿಕೃತಗೊಳಿಸಬಹುದಾದಂಥ ಇತರ ಅಧಿಕಾರಿಯು ಪ್ರಾಧಿಕಾರವು ಅದರ ಪ್ರಕಾರ್ಯಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಅವಶ್ಯವೆಂದು ಭಾವಿಸಬಹುದಾದಂಥ ಇತರ ಅಧಿಕಾರಿಗಳನ್ನು ಮತ್ತು ನೌಕರರನ್ನು ನೇಮಕ ಮಾಡಬಹುದು ಅಥವಾ ಪ್ರತಿನಿಯೋಜಿಸಬಹುದು.

(2) ಮೇಲೆ ನಿರ್ದಿಷ್ಟಪಡಿಸಲಾದ ಅಧಿಕಾರಿಗಳ ಮತ್ತು ನೌಕರರ ಆಯ್ಕೆ ಹಾಗೂ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿಯಮಿಸಬಹುದಾದಂಥವುಗಳಾಗಿರತಕ್ಕದ್ದು.

**9. ಪ್ರಾಧಿಕಾರದ ಸಭೆಗಳು.–** (1) ಪ್ರಾಧಿಕಾರದ ಸಭೆಗಳನ್ನು ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿ ಪಡೆದು ಕಾರ್ಯದರ್ಶಿಯು ಕರೆಯತಕ್ಕದ್ದು ಮತ್ತು ಅವು ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಯಾವುದೇ ಸ್ಥಳದಲ್ಲಿ ನಡೆಸತಕ್ಕದ್ದು.

(2) ಪ್ರಾಧಿಕಾರವು ಕಡೇ ಪಕ್ಷ ಎರಡು ತಿಂಗಳಿಗೊಮ್ಮೆಯಾದರೂ ಸಭೆ ಸೇರತಕ್ಕದ್ದು.

(3) ಅಧ್ಯಕ್ಷರು ವಿಶೇಷ ಸಭೆಯನ್ನು ಕರೆಯುವುದು ಅವಶ್ಯವೆಂದು ಭಾವಿಸಿದರೆ ಅಧ್ಯಕ್ಷರು ಅಥವಾ ಅಧ್ಯಕ್ಷರ ಪೂರ್ವಾನುಮತಿ ಪಡೆದು ಕಾರ್ಯದರ್ಶಿಯು ಅಂಥ ಸಭೆಯನ್ನು ಕರೆಯಬಹುದು.

(4) ಪ್ರಾಧಿಕಾರವು ತನ್ನ ಸಭೆಗಳಲ್ಲಿ ಕಾರ್ಯಕಲಾಪದ ಸಂಬಂಧದಲ್ಲಿ ವಿನಿಯಮಗಳ ಮೂಲಕ ಉಪಬಂಧ ಕಲ್ಪಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

(5) ಅಧ್ಯಕ್ಷರು ಪ್ರತಿಯೊಂದು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದ ಅಧ್ಯಕ್ಷರಿಗೆ ಯಾವುದೇ ಸಭೆಯಲ್ಲಿ ಭಾಗವಹಿಸಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿದ್ದ ಸದಸ್ಯರ ಪೈಕಿ ಆರಿಸಲ್ಪಟ್ಟ ಯಾವುದೇ ಇತರ ಸದಸ್ಯರು ಸಭೆಯಲ್ಲಿ ಅಧ್ಯಕ್ಷತೆ ವಹಿಸತಕ್ಕದು.

(6) ಗಣಪೂರ್ತಿ (ಕೋರಂ) ಆಗಲು ಒಂಬತ್ತು ಜನ ಸದಸ್ಯರಿರತಕ್ಕದ್ದು.

**10. ವ್ಯವಹರಣೆಗಳು ಸರಿಯಾಗಿವೆ ಮತ್ತು ಸಿಂಧುವಾಗಿವೆ ಎಂಬ ಪೂರ್ವಭಾವನೆ.–** ಪ್ರಾಧಿಕಾರದ ಯಾವುದೇ ಕ್ರಮ ಅಥವಾ ವ್ಯವಹರಣೆ ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿ ಇರುವಾಗ ಅಂಥ ಕ್ರಮ ಅಥವಾ ವ್ಯವಹರಣೆಯು ಅಧ್ಯಕ್ಷರು ಅಥವಾ ಸದಸ್ಯನಾಗಿ ಕೆಲಸ ಮಾಡುತ್ತಿರುವ ಯಾವುದೇ ವ್ಯಕ್ತಿಯ ಅನರ್ಹತೆಯ ಕಾರಣದಿಂದ ಅಥವಾ ನೇಮಕಾತಿಯಲ್ಲಿನ ದೋಷದ ಕಾರಣದಿಂದ ದೋಷಪೂರಿತವಾಗುತ್ತದೆ ಎಂದು ಭಾವಿಸತಕ್ಕದ್ದಲ್ಲ.

**11. ಉಪ ಸಮಿತಿ.–** ಪ್ರಾಧಿಕಾರವು ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ ತನ್ನ ಸದಸ್ಯರ ಪೈಕಿಯಿಂದ ಆರು ಜನರನ್ನು ಮೀರದಷ್ಟು ಸಂಖ್ಯೆಯ ಸದಸ್ಯರಿರುವ ಒಂದು ಉಪ ಸಮಿತಿಯನ್ನು ರಚಿಸಬಹುದು. ಪ್ರಾಧಿಕಾರದ ಅಧ್ಯಕ್ಷರು ಈ ಉಪಸಮಿತಿಯ ಅಧ್ಯಕ್ಷರು ಸಹ ಆಗಿರತಕ್ಕದ್ದು.

**12. ಉಪ ಸಮಿತಿಯ ಅಧಿಕಾರಗಳು ಮತ್ತು ಕರ್ತವ್ಯಗಳು.–** (1)ಉಪಸಮಿತಿಯು, ಪ್ರಾಧಿಕಾರವು ತನಗೆ ಪ್ರತ್ಯಾಯೋಜಿಸಲಾದಂಥ ಪ್ರಾಧಿಕಾರದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(2) ಉಪ ಸಮಿತಿಯು ಕಡೇಪಕ್ಷ ತಿಂಗಳಿಗೊಮ್ಮೆಯಾದರೂ ಸಭೆ ಸೇರತಕ್ಕದ್ದು.

(3) ಉಪಸಮಿತಿಯು, ಪ್ರಾಧಿಕಾರದ ನಿರ್ಧಾರಗಳನ್ನು ಸೂಕ್ತವಾಗಿ ಕಾರ್ಯಗತ ಗೊಳಿಸಲಾಗುತ್ತಿದೆಯೇ ಎಂಬ ಬಗ್ಗೆ ಪರಿಶೀಲಿಸಿ ನೋಡಲು ತುರ್ತು ಸ್ವರೂಪದ ವಿಷಯಗಳ ಬಗ್ಗೆ ಅಗತ್ಯ ನಿರ್ಧಾರ ಕೈಗೊಳ್ಳತಕ್ಕದ್ದು ಮತ್ತು ರಾಜ್ಯ ಸರ್ಕಾರವು ತುರ್ತು ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಸಲಹೆ ನೀಡತಕ್ಕದ್ದು.

(4) ಉಪ ಸಮಿತಿಯು, ತನ್ನ ಸಭೆಗಳಲ್ಲಿ ಕಾರ್ಯನಿರ್ವಹಣೆಯ ಸಂಬಂಧದಲ್ಲಿ, ವಿನಿಯಮಗಳ ಮೂಲಕ ಉಪಬಂಧಿಸಬಹುದಾದಂಥ ಕಾರ್ಯವಿಧಾನದ ನಿಯಮಗಳನ್ನು ಅನುಸರಿಸತಕ್ಕದ್ದು.

**13. ತಜ್ಞರ ಸೇವೆಗಳನ್ನು ಪಡೆದುಕೊಳ್ಳುವುದು.–** (1) ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಪ್ರಾಧಿಕಾರವು ಅವಶ್ಯವಾದರೆ, ತಾನು ಸೂಕ್ತವೆಂದು ಭಾವಿಸಬಹುದಾದಂಥ ವಿಧಾನದಲ್ಲಿ ತಜ್ಞರ ಸೇವೆಗಳನ್ನು ಅಥವಾ ನೆರವನ್ನು ಪಡೆದುಕೊಳ್ಳಬಹುದು.

(2) ಅಂಥ ತಜ್ಞರು ಸಲ್ಲಿಸಿದ ಸೇವೆ ಅಥವಾ ನೆರವಿನ ಬಗ್ಗೆ ಸಂಧಾಯಮಾಡತಕ್ಕ ಗೌರವಧನ ಮತ್ತು ಭತ್ಯೆಗಳು, ನಿಯಮಗಳಲ್ಲಿ ಗೊತ್ತುಪಡಿಸಬಹುದಾದಂಥ ಮೊಬಲಾಗಿರತಕ್ಕದ್ದು.

## ಅಧ್ಯಾಯ – III

**14. ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.–** (1) ಪ್ರಾಧಿಕಾರವು, ಪ್ರತಿವರ್ಷವೂ, ಗಡಿ ಪ್ರದೇಶಗಳ ಅಭಿವೃದ್ಧಿಗಾಗಿ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸತಕ್ಕದ್ದು. ರಾಜ್ಯ ಸರ್ಕಾರವು ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಮಾರ್ಪಾಟನ್ನು ಮಾಡಿ ಅಥವಾ ಮಾರ್ಪಾಟಿಲ್ಲದೆ ಅನುಮೋದಿಸಬಹುದು.

**15. ಪ್ರಾಧಿಕಾರದ ಪ್ರಕಾರ್ಯಗಳು.–** ಪ್ರಾಧಿಕಾರವು, ಕೆಳಕಂಡ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು:–

(1) ಗಡಿ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಗಳ ಅನುಷ್ಠಾನ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಾಡುವುದು. ಇದಲ್ಲದೆ, ನೆರೆಹೊರೆಯ ರಾಜ್ಯದ ಗಡಿ ಭಾಗಗಳಲ್ಲಿ ಕನ್ನಡ ಮಾತನಾಡುವ ಜನರ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಸ್ಥಿತಿಯನ್ನು ಸುಧಾರಿಸುವುದು.

(2) ರಾಜ್ಯದ ಹೊರಭಾಗದ ಗಡಿಯಲ್ಲಿ ಅವಶ್ಯವಿರುವಷ್ಟು ಕನ್ನಡ ಶಾಲೆಗಳನ್ನು ತೆರೆಯಲು ಸಹಾಯ ಒದಗಿಸುವುದು. ನೆರೆ ರಾಜ್ಯದವರು ಕನ್ನಡ ಶಾಲೆಗಳನ್ನು ಮುಚ್ಚಿರುವಂತಹ ಗ್ರಾಮಗಳಲ್ಲಿ ಕನ್ನಡಿಗರಿಗೆ ಕನ್ನಡ ಮಾಧ್ಯಮದ ಮೂಲಕ ಶಿಕ್ಷಣ ನೀಡಲು ಕನ್ನಡ ಮಾಧ್ಯಮದ ಶಾಲೆಗಳನ್ನು ತೆರೆಯುವುದು. ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡುವುದು.

(3) ಗಡಿ ಪ್ರದೇಶದಲ್ಲಿ ಕನ್ನಡದಲ್ಲಿ ಶಿಕ್ಷಣ ನೀಡುವುದಕ್ಕೆ ಅವಶ್ಯವಾದ ಶಿಕ್ಷಕರನ್ನು ನೇಮಕ ಮಾಡಲು ಸಹಾಯ ಮಾಡುವುದು. ಕನ್ನಡದಲ್ಲಿ ಕಲಿಯುವ ವಿದ್ಯಾರ್ಥಿಗಳಿಗೆ ಕನ್ನಡ ಮಾಧ್ಯಮದ ಪಠ್ಯ ಪುಸ್ತಕಗಳನ್ನು ಕಾಲಕಾಲಕ್ಕೆ ಒದಗಿಸುವುದು.

(4) ಕನ್ನಡಿಗರಿಗೆ–ಕನ್ನಡ ಭಾಷೆಯಲ್ಲಿ ದೈನಂದಿನ ಬೆಳವಣಿಗೆಗಳ ಬಗ್ಗೆ ತಿಳಿದುಕೊಳ್ಳಲು –ಕನ್ನಡ ವೃತ್ತ ಪತ್ರಿಕೆಗಳು, ಮಾಸ ಪತ್ರಿಕೆಗಳು, ವಾರ ಪತ್ರಿಕೆಗಳು ಆ ಭಾಗಗಳಲ್ಲಿ ದೊರಕುವಂತೆ ಮಾಡಲು ಗ್ರಂಥಾಲಯಗಳನ್ನು ಗಡಿ ಭಾಗಗಳಲ್ಲಿ ಪ್ರಾರಂಭ ಮಾಡುವುದು.

(5) ಕನ್ನಡ ಭಾಷೆ ಬೆಳವಣಿಗೆ ದೃಷ್ಟಿಯಿಂದ ನೋಂದಣಿಯಾದ ಕನ್ನಡಪರ ಸಂಘಟನೆಗಳಿಗೆ – ವಾರ್ಷಿಕವಾಗಿ ಭಾಷಾ ಚಟುವಟಿಕೆಗಳನ್ನು ನಡೆಸಲು ಅನುದಾನ ನೀಡುವುದು.

(6) ಗಡಿ ಪ್ರದೇಶದಲ್ಲಿ ಕನ್ನಡಪರ ಸಂಘಟನೆಗಳು ಕನ್ನಡಪರವಾಗಿ ಕ್ರಿಯಾಶೀಲರಾಗಿ ಕೆಲಸ ಮಾಡುವಂತೆ ಮಾಡುವ ಉದ್ದೇಶದಿಂದ ಹೆಚ್ಚು ಹೆಚ್ಚು ಸಂಘಗಳನ್ನು ಗಡಿ ಭಾಗಗಳಲ್ಲಿ ಕಟ್ಟಲು ಮತ್ತು ಈ ಸಂಘಟನೆಗಳು ಭಾಷಾ ಉಪನ್ಯಾಸ ಮಾಲಿಕೆಗಳನ್ನು ಸಂಘಟಿಸಲು ಸಹಾಯ ಮಾಡುವ ದೃಷ್ಟಿಯಿಂದ ಪ್ರಚಾರ ಉಪನ್ಯಾಸ ಕಾರ್ಯಕ್ರಮಗಳನ್ನು ನಡೆಸುವುದು.

(7) ಸಾಂಸ್ಕೃತಿಕ ಚಟುವಟಿಕೆಗಳನ್ನು ಗಡಿ ಪ್ರದೇಶಗಳಲ್ಲಿ ಹಮ್ಮಿಕೊಂಡು, ಗಡಿ ಕನ್ನಡಿಗರ ಸಾಂಸ್ಕೃತಿಕ ಅವಶ್ಯಕತೆಗಳನ್ನು ಪೂರೈಸುವುದು.

(8) ಕನ್ನಡ ಸಾಹಿತ್ಯ, ಚಲನಚಿತ್ರ, ನಾಟಕ, ಜಾನಪದ, ನೃತ್ಯ, ಯಕ್ಷಗಾನ, ಲಾವಣಿ, ಬಯಲಾಟ, ತೊಗಲುಬೊಂಬೆ ಆಟ, ಹರಿಕಥೆ, ಸಂಗೀತ, ಇತ್ಯಾದಿ ಕಲೆಗಳು ನಶಿಸಿಹೋಗದಂತೆ ಪ್ರದರ್ಶನಕ್ಕೆ ಸೂಕ್ತವಾದ ವೇದಿಕೆಗಳನ್ನು ಕಲ್ಪಿಸುವುದು. ರಾಜ್ಯದ ಗಡಿ ಭಾಗದ ತಾಲ್ಲೂಕುಗಳು ಹಾಗೂ ಗ್ರಾಮಗಳ ಕನ್ನಡಿಗರು ಹೊರ ರಾಜ್ಯಗಳ ಕನ್ನಡಿಗರಿಗೆ ಈ ಕಲೆಗಳನ್ನು ಪ್ರದರ್ಶಿಸಲು ಸಾಂಸ್ಕೃತಿಕ ಭವನಗಳನ್ನು ಕಟ್ಟುವುದು.

(9) ಗಡಿ ಪ್ರದೇಶ ಹಾಗೂ ಹೊರನಾಡು ಉತ್ಸವಗಳನ್ನು ಹಮ್ಮಿಕೊಳ್ಳುವುದು, ಕನ್ನಡ ಭವನಗಳನ್ನು ಕಟ್ಟುವುದು, ಗಡಿ ಪ್ರದೇಶದ ಜನರ ಪರಿಸ್ಥಿತಿಯನ್ನು ಸುಧಾರಿಸಲು ಹಲವಾರು ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಾಕಿಕೊಳ್ಳುವುದು, ಅವರ ಸಾಂಸ್ಕೃತಿಕ, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಆಶೆ ಆಕಾಂಕ್ಷೆಗಳನ್ನು ಈಡೇರಿಸುವುದು.

(10) ಗಡಿ ಪ್ರದೇಶದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನತೆಯ ಜೀವನ ಭದ್ರತೆಯ ದೃಷ್ಟಿಯಿಂದ ನೀಡಬಹುದಾದ ಸೌಲಭ್ಯಗಳ ಬಗ್ಗೆ ಅಧ್ಯಯನ ಮಾಡಿ ಸಂಬಂಧಿತ ಇಲಾಖೆಗಳ ಮೂಲಕ ನೆರವು ನೀಡುವುದು

(11) ಗಡಿ ಪ್ರದೇಶಗಳಲ್ಲಿ ಕರಕುಶಲ ಕೈಗಾರಿಕೆ, ಗುಡಿ ಕೈಗಾರಿಕೆ ಹಾಗೂ ಇತರೆ ಉದ್ಯಮಗಳಿಗೆ ಪ್ರೋತ್ಸಾಹದಾಯಕ ಕ್ರಮ ಕೈಗೊಳ್ಳುವುದು.

(12) ಗಡಿ ಪ್ರದೇಶದ ಹಳ್ಳಿಗಳಿಗೆ ಕುಡಿಯುವ ನೀರು, ಆರೋಗ್ಯ, ವ್ಯವಸಾಯ, ನೀರಾವರಿ, ರಸ್ತೆ, ಮುಂತಾದ ಅಭಿವೃದ್ಧಿ ಕೆಲಸಗಳಿಗೆ ಅಗತ್ಯವಾದ ಸೌಲಭ್ಯಗಳನ್ನು ಆಯಾಯ ಇಲಾಖೆಗಳು ಒದಗಿಸುವುದನ್ನು ಮೇಲ್ವಿಚಾರಣೆ ಮಾಡುವುದು.

**16. ಅಧಿನಿಯಮದ ಉದ್ದೇಶಗಳನ್ನು ಅನುಷ್ಠಾನಗೊಳಿಸುವುದು.–** ಪ್ರಾಧಿಕಾರವು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ, ಉಪ ವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿ ಮತ್ತು ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಇವರ ಮೂಲಕ ಅಧಿನಿಯಮದ ಉದ್ದೇಶಗಳನ್ನು ಅನುಷ್ಠಾನಗೊಳಿಸತಕ್ಕದ್ದು.

**17. ಮಾಹಿತಿ ಪಡೆದುಕೊಳ್ಳುವುದು.–** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರದ ಯಾವ ಅಧಿಕಾರಿಯಿಂದಲಾದರೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕೋರಬಹುದು ಮತ್ತು ಪಡೆದುಕೊಳ್ಳಬಹುದು ಮತ್ತು ಅಂಥ ಅಧಿಕಾರಿಯು ಪ್ರಾಧಿಕಾರವು ಕೋರಬಹುದಾದ ಮಾಹಿತಿಯನ್ನು ಒದಗಿಸಲು ಬದ್ಧನಾಗಿರತಕ್ಕದ್ದು.

**18. ಪ್ರಾಧಿಕಾರದ ಸಲಹೆಗಳು.–** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ ತನ್ನ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಬಗ್ಗೆ ರಾಜ್ಯ ಸರ್ಕಾರಕ್ಕೆ ಸಲಹೆಗಳನ್ನು ನೀಡಬಹುದು.

**19. ಕರ್ತವ್ಯ ಲೋಪವನ್ನು ದಾಖಲಿಸುವ ಮತ್ತು ನೇಮಕಾತಿ ಪ್ರಾಧಿಕಾರಕ್ಕೆ ತಿಳಿಸುವ ಅಧಿಕಾರ.–** ಪ್ರಾಧಿಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವ ಸಲುವಾಗಿ, ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಅಥವಾ ಈಗಾಗಲೇ ಜಾರಿಯಲ್ಲಿರುವ ಯಾವುದೇ ಅದೇಶವನ್ನು ರಾಜ್ಯ ಸರ್ಕಾರ ಮತ್ತು ಸ್ಥಳೀಯ ನಿಕಾಯಗಳ ಅಧಿಕಾರಿಗಳು ಮತ್ತು ನೌಕರರು ಉಲ್ಲಂಘಿಸಿದರೆ, ಅಂಥ ಉಲ್ಲಂಘನೆಯನ್ನು ಕರ್ತವ್ಯ ಲೋಪವೆಂದು ದಾಖಲಿಸತಕ್ಕದ್ದು ಮತ್ತು ಅಂಥ ವ್ಯಕ್ತಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳುವಂತೆ ನೇಮಕಾತಿ ಪ್ರಾಧಿಕಾರಕ್ಕೆ ಸಲಹೆಗಳನ್ನು ನೀಡತಕ್ಕದ್ದು.

## ಅಧ್ಯಾಯ - IV

**20. ಪ್ರಾಧಿಕಾರದ ನಿಧಿ.–** (1) ಪ್ರಾಧಿಕಾರವು, ಪ್ರಾಧಿಕಾರದ ನಿಧಿಯೆಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದು.

(2) ಈ ಮುಂದಿನವುಗಳು ಪ್ರಾಧಿಕಾರದ ನಿಧಿಯ ಒಂದು ಭಾಗವಾಗಿರತಕ್ಕದ್ದು ಅಥವಾ ಪ್ರಾಧಿಕಾರದ ನಿಧಿಗೆ ಸಂದಾಯವಾಗತಕ್ಕದ್ದು, ಎಂದರೆ:–

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ, ನಿಗಮಿತವಾದ ಅಥವಾ ನಿಗಮಿತವಾಗಿರದ ಯಾವುದೇ ನಿಕಾಯ ಅಥವಾ ಯಾರೇ ವ್ಯಕ್ತಿಗಳು ಮಾಡುವ ಎಲ್ಲ ಅನುದಾನಗಳು, ಧನಸಹಾಯಗಳು, ದಾನಗಳು ಮತ್ತು ಕೊಡುಗೆಗಳು ; ಮತ್ತು

(ii) ಯಾವುದೇ ರೀತಿಯ ಯಾವುದೇ ಮೂಲದಿಂದ ಪ್ರಾಧಿಕಾರದಿಂದ ಅಥವಾ ಅದರ ಪರವಾಗಿ ಸ್ವೀಕರಿಸಲಾದ ಇತರ ಎಲ್ಲ ಮೊತ್ತಗಳು :

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಹೂಡತಕ್ಕದ್ದು.

(4) ಪ್ರಾಧಿಕಾರದ ಕಾರ್ಯದರ್ಶಿ ಮತ್ತು ಅದರ ಅಧಿಕಾರಿಗಳು ಮತ್ತು ನೌಕರರಿಗೆ ಸಂದಾಯವಾಗತಕ್ಕ ವೇತನಗಳು, ಭತ್ಯೆಗಳು ಮತ್ತು ನಿವೃತ್ತಿ ವೇತನಗಳೂ ಸೇರಿದಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**21. ರಾಜ್ಯ ಸರ್ಕಾರದಿಂದ ಅನುದಾನ.–** (1) ರಾಜ್ಯ ಸರ್ಕಾರವು ಪ್ರತಿ ವರ್ಷ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊಬಲಗನ್ನು ಪ್ರಾಧಿಕಾರಕ್ಕೆ ಅನುದಾನ ನೀಡತಕ್ಕದ್ದು.

(2) ರಾಜ್ಯ ಸರ್ಕಾರವು ಪ್ರಾಧಿಕಾರದ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ವಾರ್ಷಿಕ ಬಜೆಟ್ಟಿನಲ್ಲಿ ಪ್ರಾಧಿಕಾರಕ್ಕೆ ಹಣಕಾಸಿನ ಹಂಚಿಕೆಗಳನ್ನು ಮಾಡಬಹುದು.

**22. ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಪ್ರಾಧಿಕಾರದ ನಿಧಿಯ ಆದಾಯ ಮತ್ತು ವೆಚ್ಚದ ಲೆಕ್ಕಪತ್ರಗಳನ್ನು ಗೊತ್ತುಪಡಿಸಬಹುದಾದಂಥ ನಿಯಮಗಳ ಅನುಸಾರವಾಗಿ ಇಡತಕ್ಕದ್ದು;

(2) ಪ್ರಾಧಿಕಾರವು ಗೊತ್ತುಪಡಿಸಬಹುದಾದಂಥ ಪ್ರಪತ್ರದಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ತಯಾರಿಸತಕ್ಕದ್ದು.

(3) ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಲೆಕ್ಕ ಪರಿಶೋಧಕರಿಂದ ಪ್ರಾಧಿಕಾರದ ಲೆಕ್ಕಪತ್ರಗಳ ವಾರ್ಷಿಕ ಲೆಕ್ಕಪರಿಶೋಧನೆ ಮಾಡಿಸತಕ್ಕದ್ದು.

(4) ಲೆಕ್ಕ ಪರಿಶೋಧಕರು ಲೆಕ್ಕ ಪರಿಶೋಧನೆಯ ಉದ್ದೇಶಗಳಿಗಾಗಿ ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅಧಿಕಾರ ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕ ಪರಿಶೋಧನೆಗಾಗಿ ಗೊತ್ತುಪಡಿಸಬಹುದಾದಂಥ ವೆಚ್ಚಗಳನ್ನು ತನ್ನ ನಿಧಿಯಿಂದ ಸಂದಾಯ ಮಾಡತಕ್ಕದ್ದು.

(6) ಲೆಕ್ಕ ಪರಿಶೋಧಕರ ವರದಿಯನ್ನು ಸ್ವೀಕರಿಸಿದ ತರುವಾಯ ಸಾಧ್ಯವಾದಷ್ಟು ಬೇಗ, ಪ್ರಾಧಿಕಾರವು ಲೆಕ್ಕ ಪರಿಶೋಧಕರ ವರದಿಯ ಒಂದು ಪ್ರತಿಯೊಂದಿಗೆ ಲೆಕ್ಕಪತ್ರಗಳ ವಾರ್ಷಿಕ ವಿವರಣಾಪಟ್ಟಿಯ ಪ್ರತಿಯೊಂದನ್ನು ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಗೊತ್ತುಪಡಿಸಬಹುದಾದಂಥ ರೀತಿಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ಪ್ರಕಟಿಸುವಂತೆ ಮಾಡತಕ್ಕದ್ದು.

(7) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕರ ವರದಿಯನ್ನು ಪರಿಶೀಲಿಸಿದ ತರುವಾಯ ತಾನು ಸೂಕ್ತವೆಂದು ಭಾವಿಸಬಹುದಾದಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

## ಅಧ್ಯಾಯ – V

## ಸಂಕೀರ್ಣ

**23. ವರದಿ.–** ಪ್ರಾಧಿಕಾರವು, ನಿಯಮಿಸಬಹುದಾದಂಥ ದಿನಾಂಕಗಳ ಒಳಗೆ ಅಂಥ ರೀತಿಯಲ್ಲಿ ಮತ್ತು ಅಂಥ ಕಾಲಾಂತರಗಳಲ್ಲಿ ನಿಯಮಿಸಬಹುದಾದ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**24. ಪ್ರಾಧಿಕಾರದ ಆಯವ್ಯಯ.–** ಪ್ರಾಧಿಕಾರವು ಪ್ರತಿವರ್ಷ, ಮುಂದಿನ ಏಪ್ರಿಲ್ ತಿಂಗಳ ಮೊದಲನೇ ದಿನಾಂಕದಿಂದ ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಅಂದಾಜನ್ನು ನಿಯಮಿಸಬಹುದಾದಂಥ ದಿನಾಂಕದಂದು ಮತ್ತು ಅಂಥ ಪ್ರಪತ್ರದಲ್ಲಿ ಸಿದ್ಧಪಡಿಸತಕ್ಕದ್ದು ಮತ್ತು ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

**25. ನಿಯಮಗಳ ರಚನಾಧಿಕಾರ.–** (1) ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅಧಿಸೂಚನೆಯ ಮೂಲಕ ಪೂರ್ವ ಪ್ರಕಟಣೆಯ ತರುವಾಯ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ಪ್ರತಿಯೊಂದು ನಿಯಮವನ್ನು ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ ರಾಜ್ಯ ವಿಧಾನ ಮಂಡಲವು ಅಧಿವೇಶನದಲ್ಲಿರುವಾಗ ಅದರ ಪ್ರತಿಯೊಂದು ಸದನದ ಮುಂದೆ ಒಂದು ಅಥವಾ ಎರಡು ಅಥವಾ ಅದಕ್ಕೂ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಿದ ಅಧಿವೇಶನ ಅಥವಾ ಅದರ ನಿಕಟ ತರುವಾಯದ ಅಧಿವೇಶನ ಮುಕ್ತಾಯವಾಗುವ ಮೊದಲು ಉಭಯ ಸದನಗಳೂ ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಒಪ್ಪಿದರೆ ಅಥವಾ ಯಾವುದೇ ನಿಯಮ ರಚಿಸಬಾರದೆಂದು ನಿರ್ಧರಿಸಿದರೆ ಆ ತರುವಾಯ, ನಿಯಮವು ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದು ಅಥವಾ ಯಾವುದೇ ಪರಿಣಾಮ ಹೊಂದತಕ್ಕದ್ದಲ್ಲ. ಆದರೆ ಅಂಥ ಯಾವುದೇ ಮಾರ್ಪಾಟು ಅಥವಾ ರದ್ಧತಿಯು ಆ ನಿಯಮದ ಅಡಿಯಲ್ಲಿ ಆ ಮೊದಲು ಮಾಡಿದ ಯಾವುದೇ ಕೃತ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**26. ವಿನಿಯಮಗಳನ್ನು ರಚಿಸಲು ಪ್ರಾಧಿಕಾರದ ಅಧಿಕಾರ.–** ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 26ನೇ ಪ್ರಕರಣದ ಮೇರೆಗೆ ಮಾಡಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸಲು ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

ಅನುಸೂಚಿ
(ಪ್ರಕರಣ (2) (ಬಿ) ಖಂಡ ಗಮನಿಸಿ)

| ಕ್ರಮ ಸಂಖ್ಯೆ | ತಾಲ್ಲೂಕಿನ ಮತ್ತು ಇತರೆ ಪ್ರದೇಶಗಳ ಹೆಸರುಗಳು |
|---|---|
| (1) | (2) |
| 1 | ಆನೇಕಲ್ |
| 2 | ಹೊಸಕೋಟೆ |
| 3 | ಕನಕಪುರ |
| 4 | ಚಳ್ಳಕೆರೆ |
| 5 | ಹಿರಿಯೂರು |
| 6 | ಮೊಳಕಾಲ್ಮೂರು |
| 7 | ಬಾಗೇಪಲ್ಲಿ |
| 8 | ಬಂಗಾರುಪೇಟೆ |
| 9 | ಚಿಂತಾಮಣಿ |
| 10 | ಗೌರಿಬಿದನೂರು |
| 11 | ಗುಡಿಬಂಡೆ |
| 12 | ಮಾಲೂರು |
| 13 | ಮುಳಬಾಗಿಲು |
| 14 | ಶ್ರೀನಿವಾಸಪುರ |
| 15 | ಮಧುಗಿರಿ |
| 16 | ಪಾವಗಡ |
| 17 | ಸಿರಾ |
| 18 | ಬಂಟ್ವಾಳ |
| 19 | ಮಂಗಳೂರು |
| 20 | ಪುತ್ತೂರು |
| 21 | ಸುಳ್ಯ |
| 22 | ಮಡಿಕೇರಿ |
| 23 | ವಿರಾಜಪೇಟೆ |
| 24 | ಚಾಮರಾಜನಗರ |
| 25 | ಗುಂಡ್ಲುಪೇಟೆ |
| 26 | ಹೆಗ್ಗಡದೇವನಕೋಟೆ |
| 27 | ಕೊಳ್ಳೇಗಾಲ |

| ಕ್ರಮ ಸಂಖ್ಯೆ | ತಾಲ್ಲೂಕಿನ ಮತ್ತು ಇತರೆ ಪ್ರದೇಶಗಳ ಹೆಸರುಗಳು |
|---|---|
| (1) | (2) |
| 28 | ಬಿಜಾಪುರ |
| 29 | ಇಂಡಿ |
| 30 | ಬಳ್ಳಾರಿ |
| 31 | ಸಂಡೂರು |
| 32 | ಸಿರಿಗುಪ್ಪೆ |
| 33 | ಅಫಜಲ್ಪುರ |
| 34 | ಆಳಂದ |
| 35 | ಚಿಂಚೋಳಿ |
| 36 | ಸೇಡಂ |
| 37 | ಶಹಪುರ |
| 38 | ಯಾದಗೀರ್ |
| 39 | ಮಾನ್ವಿ |
| 40 | ರಾಯಚೂರು |
| 41 | ಅಥಣಿ |
| 42 | ಬೆಳಗಾವಿ |
| 43 | ಹುಕ್ಕೇರಿ |
| 44 | ಚಿಕ್ಕೋಡಿ |
| 45 | ಖಾನಾಪುರ |
| 46 | ಕಾರವಾರ |
| 47 | ಜೋಯಿಡಾ |
| 48 | ಔರಾದ್ |
| 49 | ಬಸವಕಲ್ಯಾಣ |
| 50 | ಭಾಲ್ಕಿ |
| 51 | ಬೀದರ್ |
| 52 | ಹುಮ್ನಾಬಾದ್ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಜಿ.ಕೆ.ಬೋರೇಗೌಡ

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ-3)